**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ವಾದಿ ಪರವಾಗಿ ಶ್ರೀ ಎನ್.ಸಿ.ಹೆಚ್. ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈ ದಾವೆಗೆ ಪೂರಕವಾಗಿ ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳಲ್ಲಿರುವ ಸರ್ವೆ ನಂ. 59 ರ ಐದು ಪುಟಗಳಲ್ಲಿರುವ ಪಹಾಣಿ ಪತ್ರಿಕೆಯನ್ನು ನಿಪಿ-1 ಎಂದು, ದಿನಾಂಕಃ 13-12-2022 ರ ಕಾನೂನು ಬದ್ದ ನೋಟಿಸನ್ನು ನಿಪಿ-2 ಎಂದು ಮತ್ತು ಐದು ಅಂಚೆ ರಶೀದಿಗಳನ್ನು ನಿಪಿ-3 ರಿಂದ 7 ಎಂದು ಗುರುತಿಸಲಾಯಿತು.

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಮುಂದಿನ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದರಿಂದ ಸಮಯ ನೀಡಲಾಯಿತು.**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು,**
**ಚಿಂಚೋಳಿ**